**Akashvani : Bangalore**
**Regional Bulletin In Kannada**
**01.03.2025 / 18.40 hrs**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

**೧. ೧೬ನೇ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವಕ್ಕೆ ಕೆಲವೇ ಕ್ಷಣಗಳಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ**

**೨. ರಾಜ್ಯದಲ್ಲಿ ಶೇಕಡ ೮೦ ರಷ್ಟು ಶಿಕ್ಷಕರ ನೇಮಕಾತಿಗೆ ಸಂಪುಟ ಸಭೆ ಅನುಮತಿ - ಸಚಿವ ಮಧುಬಂಗಾರಪ್ಪ**

**೩. ಹೆಸರಘಟ್ಟ ತೋಟಗಾರಿಕಾ ಸಂಸ್ಥೆಗೆ ಡೀಮ್ಡ್ ವಿಶ್ವವಿದ್ಯಾನಿಲಯ ಮಾನ್ಯತೆ ಸಿಗುವ ವಿಶ್ವಾಸ - ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ**

**೪. ಕುಸುಬೆಗೆ ಬೆಂಬಲ ಬೆಲೆ ನೀಡಲು ಕೇಂದ್ರ ಸರ್ಕಾರ ಸಮ್ಮತಿ ; ಕ್ವಿಂಟಾಲ್‌ಗೆ ೫ ಸಾವಿರದ ೯೪೦ ರೂಪಾಯಿ ನಿಗದಿ**

**೫. ಬಡತನ ಕುರಿತ ಅಧ್ಯಯನದಲ್ಲಿ ಐಎಸ್‌ಇಸಿ ಪಾತ್ರ ಶ್ಲಾಘನೀಯ - ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅಭಿಮತ**

**೬. ರಾಜ್ಯದ ೯ ವಿಶ್ವವಿದ್ಯಾಲಯಗಳ ಮುಚ್ಚುವ ಕ್ರಮಕ್ಕೆ ವಿರೋಧ ; ಮಂಡ್ಯದಲ್ಲಿ ಬಿಜೆಪಿ-ಜೆಡಿಎಸ್ ಪ್ರತಿಭಟನೆ**

**<><*<><>*><>**

‘ಸರ್ವಜನಾಂಗದ ಶಾಂತಿಯ ತೋಟ’ ಎಂಬ ಧ್ಯೇಯದೊಂದಿಗೆ ನಡೆಯಲಿರುವ ’೧೬ನೇ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ’ವನ್ನು ಕೆಲವೇ ಕ್ಷಣಗಳಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಭಾಪತಿ ಬಸವರಾಜ ಹೊರಟ್ಟಿ, ಹಿರಿಯ ನಟ ಶಿವರಾಜಕುಮಾರ್, ನಿರ್ದೇಶಕ ನಾಗತಿಹಳ್ಳಿ ಚಂದ್ರಶೇಖರ್ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದಾರೆ. ಇಂದಿನಿಂದ ಮಾರ್ಚ್ ೮ರ ವರೆಗೆ ಚಲನಚಿತ್ರೋತ್ಸವ ನಡೆಯಲಿದ್ದು, ೧೩ ಚಿತ್ರಮಂದಿರಗಳಲ್ಲಿ ಸುಮಾರು ೬೦ ದೇಶಗಳ ೨೦೦ಕ್ಕೂ ಹೆಚ್ಚು ಚಲನಚಿತ್ರಗಳ ೪೦೦ ಪ್ರದರ್ಶನಗಳು ಇರಲಿವೆ. ದೇಶ ವಿದೇಶಗಳ ಕಲಾವಿದರು, ನಿರ್ಮಾಪಕರು ತಮ್ಮ ಚಿತ್ರಗಳನ್ನು ಪ್ರದರ್ಶಿಸಲಿದ್ದಾರೆ. ಇಂದು ಉದ್ಘಾಟನಾ ಚಿತ್ರವಾಗಿ ಇಂಡಿಯಾ ಫೈಯರ್ ಚಿತ್ರ ರಾತ್ರಿ ೮ಕ್ಕೆ ಪ್ರದರ್ಶನ ಕಾಣಲಿದೆ. ಈಗಾಗಲೇ ೩ ಸಾವಿರಕ್ಕೂ ಹೆಚ್ಚು ಪ್ರತಿನಿಧಿಗಳು ಹೆಸರು ನೊಂದಾಯಿಸಿಕೊಂಡಿದ್ದು, ಚಲನಚಿತ್ರ ವೀಕ್ಷಿಸಲು ಸಿನಿಮಾಸಕ್ತರು ಕಾತುರರಾಗಿದ್ದಾರೆ.

**<><*<><>*><>**

ಶಿಕ್ಷಣ ಇಲಾಖೆಯಲ್ಲಿ ಶೇಕಡ ೮೦ರಷ್ಟು ಶಿಕ್ಷಕರ ನೇಮಕಾತಿಗೆ ಸಂಪುಟ ಸಭೆಯಲ್ಲಿ ಅನುಮತಿ ಸಿಕ್ಕಿದ್ದು, ಶೀಘ್ರವೇ ನೇಮಕಾತಿ ಪ್ರಕ್ರಿಯೆ ಆರಂಭವಾಗಲಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ. ಮಂಡ್ಯ ವಿಶ್ವವಿದ್ಯಾಲಯದ ಆವರಣದಲ್ಲಿ ಇಂದು ನಡೆದ ರಾಜ್ಯ ಮಟ್ಟದ ಶೈಕ್ಷಣಿಕ ಅಧಿವೇಶನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ಕನಿಷ್ಟ ೧೫ ಸಾವಿರ

ಶಿಕ್ಷಕರ ನೇಮಕಾತಿಯಾಗಬೇಕೆಂದು ಮುಖ್ಯಮಂತ್ರಿಗಳಿಗೆ ಮನವಿ ಮಾಡಲಾಗಿದ್ದು, ಮುಖ್ಯಮಂತ್ರಿಯವರು ಪೂರಕವಾಗಿ, ಸ್ಪಂದಿಸಿದ್ದಾರೆ. ಶಿಕ್ಷಕರ ಸಮಸ್ಯೆ ಬಗೆಹರಿಸಲು ಇಲಾಖೆ ಮತ್ತು ಸರ್ಕಾರ ಬದ್ಧವಾಗಿದೆ ಎಂದು ಪುನರುಚ್ಚರಿಸಿದ್ದಾರೆ.

<><*<><>*><>

ವಿಕಸಿತ ಭಾರತಕ್ಕಾಗಿ ತೋಟಗಾರಿಕೆ ಎಂಬ ಶೀರ್ಷಿಕೆಯಡಿ ರಾಷ್ಟ್ರೀಯ ತೋಟಗಾರಿಕಾ ಮೇಳ ಆಯೋಜಿಸಲಾಗಿದೆ ಎಂದು ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ. ಕುಮಾರಸ್ವಾಮಿ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ರಾಷ್ಟ್ರೀಯ ತೋಟಗಾರಿಕಾ ಸಮ್ಮೇಳನದಲ್ಲಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ತೋಟಗಾರಿಕೆ ಒಂದು ಲಾಭದಾಯಕ ಉದ್ಯಮವಾಗಿದೆ. ಸಣ್ಣ ಮತ್ತು ಅತಿ ಸಣ್ಣ ರೈತರು ಇದರ ಲಾಭ ಪಡೆಯುತ್ತಿದ್ದಾರೆ ಎಂದು ಹೇಳಿದರು. ಮುಂಬರುವ ದಿನಗಳಲ್ಲಿ ತೋಟಗಾರಿಕಾ ಸಂಸ್ಥೆಗೆ ಡೀಮ್ಡ್ ವಿಶ್ವವಿದ್ಯಾಲಯದ ಸ್ಥಾನ ಸಿಗುವ ವಿಶ್ವಾಸವಿದೆ ಅಭಿಪ್ರಾಯಪಟ್ಟಿದ್ದಾರೆ.

<><*<><>*><>

ರಾಜ್ಯ ಸರ್ಕಾರದ ಕೋರಿಕೆ ಮೇರೆಗೆ ಕೇಂದ್ರ ಸರ್ಕಾರ ಕುಸುಬೆಯನ್ನು ಬೆಂಬಲ ಬೆಲೆಯಲ್ಲಿ ಖರೀದಿಸಲು ಸಮ್ಮತಿಸಿದ್ದು, ಕ್ವಿಂಟಾಲ್‌ಗೆ ೫ ಸಾವಿರದ ೯೪೦ ರೂಪಾಯಿ ನಿಗದಿಪಡಿಸಲಾಗಿದೆ ಎಂದು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಎಸ್.ಪಾಟೀಲ್ ತಿಳಿಸಿದ್ದಾರೆ. ಮಾರುಕಟ್ಟೆಯಲ್ಲಿ ಕುಸುಬೆ ಬೆಲೆ ಕುಸಿದಿರುವ ಕಾರಣ ಬೆಂಬಲ ಬೆಲೆಯಲ್ಲಿ ಖರೀದಿಗೆ ರಾಜ್ಯ ಸರ್ಕಾರ ಸಲ್ಲಿಸಿದ ಪ್ರಸ್ತಾವನೆಗೆ ಕೇಂದ್ರ ಸರ್ಕಾರ ಅನುಮೋದನೆ ನೀಡಿದ್ದು, ಸಂಬಂಧಪಟ್ಟವರು ಖರೀದಿ ಪ್ರಕ್ರಿಯೆ ಆರಂಭಿಸಲು ನಿರ್ದೇಶನ ನೀಡಲಾಗಿದೆ ಎಂದು ಹೇಳಿದ್ದಾರೆ. ರಾಜ್ಯದ ಬೀದರ್, ಧಾರವಾಡ, ದಾವಣಗೆರೆ, ಗದಗ, ವಿಜಯಪುರ, ಕಲಬುರಗಿ, ಚಿತ್ರದುರ್ಗ, ಕೊಪ್ಪಳ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಕುಸುಬೆ ಬೆಳೆಯಲಾಗುತ್ತಿದೆ. ರೈತರು ಮಾರುಕಟ್ಟೆಯಲ್ಲಿ ಕಡಿಮೆ ಬೆಲೆಗೆ ಮಾರಾಟ ಮಾಡದೆ ಬೆಂಬಲ ಬೆಲೆ ಖರೀದಿ ಕೇಂದ್ರಗಳ ಸದುಪಯೋಗಪಡೆದುಕೊಳ್ಳಬೇಕು ಎಂದು ಸಚಿವರು ಮನವಿ ಮಾಡಿದ್ದಾರೆ.

<><*<><>*><>

"ಸಾಮಾಜಿಕ ಮತ್ತು ಆರ್ಥಿಕ ಬದಲಾವಣೆಯನ್ನು ತರಲು, ನೀತಿಗಳು ಮಾತ್ರವಲ್ಲದೆ ನಮ್ಮ ಸಾಮೂಹಿಕ ಪ್ರಯತ್ನಗಳೂ ಅತ್ಯಗತ್ಯ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅಭಿಪ್ರಾಯಪಟ್ಟಿದ್ದಾರೆ. ಸಾಮಾಜಿಕ ಮತ್ತು ಆರ್ಥಿಕ ಬದಲಾವಣೆಯ ಸಂಸ್ಥೆಯ ೫೧ನೇ ಸಾಮಾನ್ಯ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಆರ್ಥಿಕ ಸಮೃದ್ಧಿ ಮತ್ತು ಸಾಮಾಜಿಕ ಸಾಮರಸ್ಯದಿಂದ ಮಾತ್ರ ಸದೃಢ ಸಮಾಜದ ಅಡಿಪಾಯ ಸಾಧ್ಯ ಎಂದು ತಿಳಿಸಿದ್ದಾರೆ. ಬಡತನ ಕಡಿಮೆ ಮಾಡುವ ಕುರಿತ ಅಧ್ಯಯನ ನಡೆಸುವ ಮೂಲಕ ಐಎಸ್‌ಇಸಿ, ಕೇಂದ್ರ ಮತ್ತು ರಾಜ್ಯ ಸರ್ಕಾರಕ್ಕೆ ಸಹಾಯಕವಾಗಿದೆ ಎಂದು ಹೇಳಿದ್ದಾರೆ. "ಜ್ಞಾನ ಮತ್ತು ಸಂಶೋಧನೆಯ ವಿನಿಮಯಕ್ಕಾಗಿ ಐಎಸ್‌ಇಸಿ ದೇಶ ಮತ್ತು ವಿದೇಶದ ಪ್ರತಿಷ್ಠಿತ ವಿಶ್ವವಿದ್ಯಾಲಯಗಳು ಮತ್ತು ಸಂಸ್ಥೆಗಳೊಂದಿಗೆ ಸಕ್ರಿಯವಾಗಿ ಪಾಲುದಾರಿಕೆಯನ್ನು ಹೊಂದಿರುವುದು ಸಂತಸ ತಂದಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

<><*<><>*><>

ಮುನ್ನೆಚ್ಚರಿಕಾ ಕ್ರಮವಾಗಿ ಬೇಸಿಗೆಯಲ್ಲಿ ಕುಡಿಯುವ ನೀರಿನ ಅಭಾವ ಆಗದಂತೆ ಅಧಿಕಾರಿಗಳು ಸಿದ್ಧತೆ ಮಾಡಿಕೊಳ್ಳಬೇಕು ಎಂದು ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ ಹೆಚ್.ಸಿ.ಮಹದೇವಪ್ಪ ಸೂಚಿಸಿದ್ದಾರೆ. ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಇಂದು ಹಮ್ಮಿಕೊಂಡಿದ್ದ ಬೇಸಿಗೆಯಲ್ಲಿ ಕುಡಿಯುವ ನೀರಿನ ಲಭ್ಯತೆ ಮತ್ತು ಜಾನುವಾರುಗಳ ಮೇವಿನ ಲಭ್ಯತೆ ಕುರಿತ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ

ಅವರು ಮಾತನಾಡಿದರು. ಮುಂಬರುವ ಬೇಸಿಗೆಯಲ್ಲಿ ನೀರಿನ ಅಭಾವ ಉಂಟಾಗುವ ಗ್ರಾಮಗಳನ್ನು ಗುರುತಿಸಿ ಪಟ್ಟಿ ಮಾಡಿಕೊಂಡು ನೀರಿನ ಪೂರೈಕೆಗೆ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಿ ಎಂದು ನಿರ್ದೇಶನ ನೀಡಿದ್ದಾರೆ. ಜಾನುವಾರುಗಳಿಗೆ ಮೇವುಗಳ ಕೊರತೆ ಉಂಟಾಗದಂತೆ ಈಗಲೇ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು. ಬೇಸಿಗೆಯಲ್ಲಿ ಶುದ್ಧ ಕುಡಿಯುವ ನೀರು ದೊರೆಯುವಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದ್ದಾರೆ. ಜಿಲ್ಲಾಧಿಕಾರಿ ಜಿ ಲಕ್ಷ್ಮೀಕಾಂತ ರೆಡ್ಡಿ ಮಾತನಾಡಿ ಜಿಲ್ಲೆಯ ಜಲಾಶಯಗಳಲ್ಲಿ ಅಗತ್ಯ ಪ್ರಮಾಣದ ನೀರು ಇದ್ದು ಮೇ ಅಂತ್ಯದವರೆಗೆ ಕುಡಿಯುವ ನೀರಿಗೆ ಯಾವುದೆ ತೊಂದರೆ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

**<><*<><>*><>**

ಮಂಡ್ಯ ವಿಶ್ವವಿದ್ಯಾಲಯ ಸೇರಿದಂತೆ ರಾಜ್ಯದ ೯ ವಿಶ್ವವಿದ್ಯಾಲಯಗಳನ್ನು ಮುಚ್ಚುತ್ತಿರುವ ರಾಜ್ಯ ಸರ್ಕಾರದ ಕ್ರಮ ಖಂಡಿಸಿ ಬಿಜೆಪಿ ಮತ್ತು ಜೆಡಿಎಸ್ ಮುಖಂಡರು ಪ್ರತಿಭಟನೆ ನಡೆಸಿದರು. ವಿಧಾನಸಭೆ ವಿಪಕ್ಷ ನಾಯಕ ಆರ್.ಅಶೋಕ ನೇತೃತ್ವದಲ್ಲಿ ಮಂಡ್ಯ ನಗರದ ಸರ್ ಎಂ.ವಿಶ್ವೇಶ್ವರಯ್ಯ ಪ್ರತಿಮೆ ಮುಂದೆ ಧರಣಿ ನಡೆಯಿತು. ಈ ಸಂದರ್ಭದಲ್ಲಿ ಮಾತನಾಡಿದ ಆರ್.ಅಶೋಕ, ವಿಶ್ವವಿದ್ಯಾಲಯಗಳನ್ನು ಉಳಿಸಲು ಮಂಡ್ಯದಿಂದ ಹೋರಾಟ ಆರಂಭಿಸಿದ್ದು, ಎಲ್ಲಾ ೯ ಜಿಲ್ಲೆಗಳಲ್ಲೂ ಹೋರಾಟ ನಡೆಯಲಿದೆ ಎಂದು ತಿಳಿಸಿದ್ದಾರೆ. ಸದನದಲ್ಲಿ ಈ ಬಗ್ಗೆ ಹೋರಾಟ ನಡೆಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

**<><*<><>*><>**

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಕಲ್ಯಾಣಕ್ಕಾಗಿ ಮೀಸಲಿಟ್ಟ ಎಸ್.ಸಿ.ಎಸ್.ಪಿ ಮತ್ತು ಟಿ.ಎಸ್.ಪಿ ಯೋಜನೆಯ ೨೫ ಸಾವಿರ ಕೋಟಿ ಹಣವನ್ನು ಸರ್ಕಾರ ದುರ್ಬಳಕೆ ಮಾಡಿದೆ ಎಂದು ಆರೋಪಿಸಿ ಕೊಪ್ಪಳದಲ್ಲಿ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ನೇತೃತ್ವದಲ್ಲಿ ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಯಿತು. ಕೊಪ್ಪಳದ ಬಸವೇಶ್ವರ ಸರ್ಕಲ್ ನಿಂದ ಜಿಲ್ಲಾಧಿಕಾರಿ ಕಚೇರಿಯವರೆಗೆ ನಡೆದ ಮೆರವಣಿಗೆಯ ಬಳಿಕ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು. ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಅಭಿವೃದ್ಧಿಗೆ ಮೀಸಲಾದ ಹಣವನ್ನು ತಪ್ಪದೇ ಅವರ ಅಭಿವೃದ್ಧಿಗೆ ಮಾತ್ರ ಬಳಸುವಂತೆ ಆಗ್ರಹಿಸಲಾಯಿತು.

**<><*<><>*><>**

ತಾಲೂಕು ಕೇಂದ್ರಗಳಲ್ಲಿ ಸರಕಾರಿ ಕಚೇರಿಗಳನ್ನು ಪ್ರಾರಂಭಿಸಿ ಜನರಿಗೆ ಸ್ಥಳೀಯವಾಗಿ ದಾಖಲೆಗಳು ಲಭ್ಯವಾಗಲು ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ. ಪಾಟೀಲ್ ತಿಳಿಸಿದ್ದಾರೆ. ತಿಕೋಟಾದಲ್ಲಿ ಇಂದು ಗ್ಯಾರಂಟಿ ಸಮಿತಿ ಕಚೇರಿ ಉದ್ಘಾಟಿಸಿ ಮಾತನಾಡಿದ ಅವರು, ಇದರಿಂದ ಗ್ರಾಮೀಣ ಭಾಗದ ಜನರಿಗೆ ಹಣ ಮತ್ತು ಸಮಯ ಉಳಿತಾಯವಾಗಲಿದೆ ಎಂದು ಹೇಳಿದ್ದಾರೆ. ರಾಜ್ಯದಲ್ಲಿ ಇದೇ ಮೊದಲ ಬಾರಿಗೆ ಬಬಲೇಶ್ವರ ಮತಕ್ಷೇತ್ರದಲ್ಲಿ ಎರಡೂ ತಾಲೂಕು ಕೇಂದ್ರಗಳಲ್ಲಿ ತಾಲೂಕು ಶಕ್ತಿ ಸೌಧ ನಿರ್ಮಿಸಲಾಗಿದೆ. ಇದರಿಂದ ತಿಕೋಟಾ ಮತ್ತು ಬಬಲೇಶ್ವರ ತಾಲೂಕುಗಳ ಜನರು ಪಹಣಿ, ಆಕಾರಬಂದ ಸೇರಿದಂತೆ ನಾನಾ ದಾಖಲೆಗಳಿಗಾಗಿ ಸರಕಾರಿ ಕಚೇರಿಗಳಿಗೆ ಅಲೆದಾಡುವುದು ತಪ್ಪಲಿದೆ ಎಂದು ತಿಳಿಸಿದ್ದಾರೆ. ಇದೇ ವೇಳೆ ಸಚಿವರು ರೈತರಿಗೆ ಭೂದಾಖಲೆ ಪ್ರತಿಗಳನ್ನು ವಿತರಿಸಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**